# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್. ರಸ್ತೆ, ತುಮಕೂರು–572 103 ☎:0816–2255650,2273511 ಫ್ಯಾಕ್ಸ್:0816–2270719

ಸಂಖ್ಯೆ:ತುವಿ:ಪವಿ:2024–25/256

ದಿನಾಂಕ:25.06.2024

## : ಸುತ್ತೋಲೆ :

ತುರ್ತು

ವಿಷಯ : ವಿವಿಧ ಸ್ನಾತಕ ಪದವಿ ಪರೀಕ್ಷೆಗಳಿಗೆ ತಮ್ಮ ಕಾಲೇಜಿಗೆ ಅವಶ್ಯವಿರುವ ಉತ್ತರ ಪತ್ರಿಕೆಗಳ ಮಾಹಿತಿ ಒದಗಿಸುವ ಬಗ್ಗೆ.

ಉಲ್ಲೇಖ : 1. ಘಟಕ/ಎಲ್ಲಾ ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳಲ್ಲಿನ ಪ್ರಾಂಶುಪಾಲರುಗಳ ಆನ್‌ಲೈನ್ ಸಭೆಯ ದಿನಾಂಕ:14.06.2024

2. ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ:20.06.2024

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರನ್ವಯ ಘಟಕ/ಎಲ್ಲಾ ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳಲ್ಲಿನ ಪ್ರಾಂಶುಪಾಲರುಗಳು ದಿನಾಂಕ:14.06.2024 ರಂದು ನಡೆದ ಆನ್‌ಲೈನ್ ಸಭೆಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದಾಗಿ O.E.C. (Open Elective Courses), S.E.C. (Skill Enhancement Courses), ಬಿ.ಎಸ್ಸಿ. ಪದವಿಯಲ್ಲಿನ ಎಲ್ಲಾ ವಿಷಯಗಳಿಗೆ (ಗಣಿತಶಾಸ್ತ್ರ ಹೊರತುಪಡಿಸಿ) 24(ಇಪ್ಪತ್ನಾಲ್ಕು) ಪುಟಗಳುಳ್ಳ ಉತ್ತರ ಪತ್ರಿಕೆಗಳನ್ನು ಉಪಯೋಗಿಸಲು ಹಾಗೂ ಉಳಿದೆಲ್ಲಾ ಪದವಿ/ಕೋರ್ಸುಗಳಲ್ಲಿನ ಎಲ್ಲಾ ಪತ್ರಿಕೆ/ವಿಷಯಗಳಿಗೆ 36(ಮೂವತ್ತಾರು) ಪುಟಗಳುಳ್ಳ ಉತ್ತರ ಪತ್ರಿಕೆಗಳನ್ನು ಉಪಯೋಗಿಸಲು ಸರ್ವಾನುಮತದಿಂದ ಒಪ್ಪಿಗೆ ಸೂಚಿಸಿರುವುದರಿಂದ ಉಲ್ಲೇಖ (2) ರ ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ ಮುಂದಿನ ದಿನಗಳಲ್ಲಿ ನಡೆಯುವ ಎಲ್ಲಾ ಸ್ನಾತಕ ಪದವಿ ಪರೀಕ್ಷೆಗಳಿಗೆ ಕಡ್ಡಾಯವಾಗಿ ಮೇಲೆ ತಿಳಿಸಿರುವಂತೆ ಅಗತ್ಯ ಕ್ರಮವಹಿಸಲು ಈ ಮೂಲಕ ತಮಗೆ ತಿಳಿಸಲಾಗಿದೆ.

ಮುಂದುವರೆದು, ಮೇಲ್ಕಂಡ ವಿಷಯವನ್ನು ಗಮನದಲ್ಲಿಟ್ಟುಕೊಂಡು **2024 ರ ಆಗಸ್ಟ್ ಮಾಹೆಯಲ್ಲಿ ನಡೆಯಲಿರುವ ವಿವಿಧ ಸ್ನಾತಕ ಪದವಿಗಳ II, IV & VI ನೇ ಸೆಮಿಸ್ಟರ್ ಪರೀಕ್ಷೆಗಳಿಗೆ** ಅವಶ್ಯವಿರುವ ಉತ್ತರ ಪತ್ರಿಕೆಗಳ ಸಂಖ್ಯೆಯನ್ನು ಈ ಕೆಳಕಂಡ ಕೋಷ್ಟಕದಲ್ಲಿ ನಮೂದಿಸಿ **ದಿನಾಂಕ:29.06.2024 ರೊಳಗೆ ಮಾಹಿತಿಯನ್ನು ಪರೀಕ್ಷಾ ವಿಭಾಗದ ಪ್ರಾಂಶುಪಾಲರುಗಳ ವಾಟ್ಸ್‌ಆಪ್ ಗ್ರೂಪ್‌ನಲ್ಲಿ ಹಾಗೂ ಹಾರ್ಡ್‌ಕಾಪಿ ಯನ್ನು "ಮಾನ್ಯ ಕುಲಸಚಿವರು(ಮೌ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು" ಇವರಿಗೆ ಸಲ್ಲಿಸುವಂತೆ ಈ ಮೂಲಕ ತಮಗೆ ಸೂಚಿಸಲಾಗಿದೆ.**

| 2024 ರ ಆಗಸ್ಟ್ ಮಾಹೆಯಲ್ಲಿ ನಡೆಯಲಿರುವ ವಿವಿಧ ಸ್ನಾತಕ ಪದವಿ ಪರೀಕ್ಷೆಗಳಿಗೆ ಉತ್ತರ ಪತ್ರಿಕೆಗಳ ಬೇಡಿಕೆ | | | | |
|---|---|---|---|---|
| ಕ್ರಮ ಸಂಖ್ಯೆ | 24 (ಇಪ್ಪತ್ನಾಲ್ಕು) ಪುಟಗಳುಳ್ಳ ಉತ್ತರ ಪತ್ರಿಕೆಗಳ ಸಂಖ್ಯೆ | | 36 (ಮೂವತ್ತಾರು) ಪುಟಗಳುಳ್ಳ ಉತ್ತರ ಪತ್ರಿಕೆಗಳ ಸಂಖ್ಯೆ | |
| | ಪ್ರಸ್ತುತ ದಾಸ್ತಾನಿನಲ್ಲಿರುವುದು | ಅವಶ್ಯವಿರುವುದು | ಪ್ರಸ್ತುತ ದಾಸ್ತಾನಿನಲ್ಲಿರುವುದು | ಅವಶ್ಯವಿರುವುದು |
| | | | | |

ಕುಲಸಚಿವರು(ಮೌಲ್ಯಮಾಪನ)

ಕುಲಸಚಿವರು (ಮೌಲ್ಯಮಾಪನ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

ಎಲ್ಲಾ ಪ್ರಾಂಶುಪಾಲರುಗಳು, ಘಟಕ / ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು :

1. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – **ಇಂದೇ ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸುವುದು ಹಾಗೂ ಎಲ್ಲಾ ಸ್ನಾತಕ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಇ-ಮೇಲ್ ಮುಖಾಂತರ ಕಳುಹಿಸುವುದು.**
4. ಕಛೇರಿ ಪ್ರತಿ.